# ಪ್ರಧಾನ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ.
# ನ್ಯಾಯಾಲಯ, ಹೊಸನಗರ
# ಸಿ.ಸಿ. ನಂ. 3233/2022

**ಚಾಸಾ–5 ಫ್ರಾಸಾ–4**

| | | |
|---|---|---|
| ಹೆಸರು | – | ರಾಘವೇಂದ್ರ |
| ತಂದೆಯ ಹೆಸರು | – | ಮೂರ್ತಿ ವಿ.ಎಸ್ |
| ವಯಸ್ಸು | – | **45** ವರ್ಷ |
| ವೃತ್ತಿ | – | ವಲಯ ಅರಣ್ಯ ಅಧಿಕಾರಿ |
| ವಾಸಸ್ಥಳ | – | ಸಾಗರ. |

(ದಿನಾಂಕಃ **19.06.2025** ರಂದು ಸಾಕ್ಷಿಗೆ ಕ್ರಮಬದ್ಧವಾಗಿ ಪ್ರಮಾಣ ವಚನವನ್ನು ಬೋಧಿಸಲಾಯಿತು)

**ಮುಖ್ಯ ವಿಚಾರಣೆ ಃ ಸಹಾಯಕ ಸರ್ಕಾರಿ ಅಭಿಯೋಜಕ ರವರಿಂದ ಃ**

1. ನಾನು ಮೇ 2022 ರಿಂದ ಆಗಸ್ಟ 2024 ರವರೆಗೆ ಹೊಸನಗರ ವಲಯದಲ್ಲಿ ವಲಯ ಅರಣ್ಯಾಧಿಕಾರಿಯಾಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

2. ಸದರಿ ಪ್ರಕರಣದಲ್ಲಿ ಹಿಂದಿನ ವಲಯ ಅರಣ್ಯ ಅಧಿಕಾರಿಗಳು (ಚಾಸ 4) ರವರು ಕೈಗೊಂಡು ವಿಚಾರಣಾ ವರದಿಯನ್ನು ಉಪ ಅರಣ್ಯ ಸಂರಕ್ಷಣಾಧಿಕಾರಿ ಸಾಗರ ವಿಭಾಗ ರವರಿಗೆ ಸಲ್ಲಿಸಿರುತ್ತಾರೆ. ಅದರಂತೆ ದಿನಾಂಕಃ 14.07.2022 ರಂದು ಉಪ ಅರಣ್ಯ ಸಂರಕ್ಷಣಾಧಿಕಾರಿ ಸಾಗರ ರವರಿಂದ ಪ್ರಕರಣವನ್ನು ನ್ಯಾಯಾಲಯದ ಮುಂದೆ ದಾಖಲಿಸಲು ಅನುಮತಿಯನ್ನು ಪಡೆದು ತದನಂತರದಲ್ಲಿ ಪಂಚನಾಮೆಯಲ್ಲಿ ಉಪಸ್ಥಿತರಿದ್ದ ಸಿಬ್ಬಂದಿಗಳಾದ ಚಾಸ 1 ರಿಂದ ಚಾಸ 3 ರವರ ಹೇಳಿಕೆಯನ್ನು ಪಡೆದು ಕಡತಕ್ಕೆ ಅಳವಡಿಸಿಕೊಂಡಿರುತ್ತೇನೆ.

3. ಈ ಹಂತದಲ್ಲಿ ಸಾಕ್ಷಿಗೆ ಒಂದು ದಾಖಲೆಯನ್ನು ತೋರಿಸಿದ್ದು, ಅದು ಚಾಸ 2 ರವರ ಹೇಳಿಕೆಯಾಗಿದ್ದು, ಅದನ್ನು ಸಾಕ್ಷಿ ನೋಡಿ ಗುರುತಿಸಿದ್ದು, ಸದರಿಯನ್ನು ಈಗಾಗಲೇ ನಿಪಿ5 ಎಂದು ಗುರುತಿಸಲ್ಪಟ್ಟಿರುತ್ತದೆ.

4. ನಂತರ ಅಗತ್ಯ ದಾಖಲೆಗಳಾದ ಪ್ರಥಮ ವರ್ತಮಾನ ವರದಿ, ಪಂಚನಾಮೆ, ನಕಾಶೆ, ಗ್ರಾಮ ನಕಾಶೆ ಹಾಗೂ ಜಿಪಿಎಸ್ ನಕಾಶೆ ಮತ್ತು ಫೋಟೋ ಮತ್ತು ಅದರ ಸಿಡಿ ಮತ್ತು ಕಲಂ 65 ಬಿ ಭಾರತ ಸಾಕ್ಷಿ ಅಧಿನಿಯದ ದಾಖಲೆಯನು್ನ ಕ್ರೂಡಿಕರಿಸಿ ಕಡತಕ್ಕೆ ಅಳವಡಿಸಿಕೊಂಡಿದು ಮಾನ್ಯ ನ್ಯಾಯಾಲಯಕ್ಕೆ ಅಂತಿಮ ದೋಷರೋಪಣ ಪಟ್ಟಿಯನ್ನು ನಿವೇದಿಸಿಕೊಂಡಿರುತ್ತೇನೆ

5. ಈ ಹಂತದಲ್ಲಿ ಸಾಕ್ಷಿಗೆ ಒಂದು ದಾಖಲೆಯನ್ನು ತೋರಿಸಿದ್ದು, ಅದು ಕಲಂ 65 ಬಿ ಭಾರತೀಯ ಸಾಕ್ಷ್ಯ ಅಧಿನಿಯಮದ ಪ್ರಮಾಣ ಪತ್ರವಾಗಿದ್ದು, ಅದನ್ನು ಸಾಕ್ಷಿ ನೋಡಿ ಗುರುತಿಸಿದ್ದು, ಸದರಿಯನ್ನು ನಿಪಿ8 ಎಂದು, ಅದರಲ್ಲಿನ ತನ್ನ ಸಹಿಯನ್ನು ಸಾಕ್ಷಿ ನೋಡಿ ಗುರುತಿಸಿದ್ದು, ಸದರಿ ಸಾಕ್ಷಿ ಸಹಿಯನ್ನು ನಿಪಿ8(ಎ) ಎಂದು ಗುರುತಿಸಲಾಯಿತು.

**<u>ಪಾಟೀ ಸವಾಲುಃ ಆರೋಪಿಗಳ ಪರ ವಕೀಲರಾದ ಶ್ರೀ ಕೆ.ಬಿ.ಪಿ ರವರಿಂದಃ</u>**

1. ನಾನು ಈ ಪ್ರಕರಣದಲ್ಲಿ ತನಿಖೆಯನ್ನು ಕೈಗೊಂಡಿರುವುದಿಲ್ಲ ಎಂದು ಸೂಚಿಸಿದರೆ ಸರಿ.

**<u>ಮರು ವಿಚಾರಣೆಃ ಇರುವುದಿಲ್ಲ.</u>**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು).

ಓ. ಹೇ. ಕೇ. ಸ. ಎಂ. ಒ.

ಪ್ರಧಾನ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ.,
ಹೊಸನಗರ.